**All India Radio: Bangalore**
**Regional Bulletin In Kannada**
**17.08.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಅವೈಜ್ಞಾನಿಕ, ದುರ್ಬಲ, ಕಟ್ಟಡಗಳನ್ನು ಗುರುತಿಸಿ ನೋಟಿಸ್ ಜಾರಿಗೆ ರಾಜ್ಯ ಸರ್ಕಾರ ನಿರ್ಧಾರ
2. ಗೌರಿ-ಗಣೇಶ ಚತುರ್ಥಿ ಹಿನ್ನೆಲೆ; ಪರಿಸರ ಸ್ನೇಹಿ ಮೂರ್ತಿಗಳ ಪ್ರತಿಷ್ಠಾಪನೆಗೆ ಜನತೆಯಲ್ಲಿ ಸಚಿವರ ಮನವಿ
3. ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮಾದರಿಯಲ್ಲಿ ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣ ಅಭಿವೃದ್ಧಿ - ಸಚಿವ ವಿ. ಸೋಮಣ್ಣ
4. ಮಹಾರಾಜ ಟ್ರೋಫಿ ಕ್ರಿಕೆಟ್ ಪಂದ್ಯಾವಳಿ ; ಮಂಗಳೂರು ಡ್ರಾಗನ್ಸ್, ಬೆಂಗಳೂರು ಬ್ಲಾಸ್ಟರ್ಸ್ ತಂಡಗಳ ನಡುವೆ ಹಣಾಹಣಿ

<><><><>

ಬೆಂಗಳೂರಿನ ಹಲಸೂರು ಗೇಟ್ ಪೊಲೀಸ್ ಠಾಣೆ ವ್ಯಾಪ್ತಿಯ ನಗರತ್‌ಪೇಟೆ ವಾಣಿಜ್ಯ ಕಟ್ಟಡದಲ್ಲಿ ಸಂಭವಿಸಿದ ಭೀಕರ ಅಗ್ನಿ ಅವಘಡ ಸ್ಥಳಕ್ಕೆ ಇಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತೆರಳಿ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಟ್ಟಡ ನಿರ್ಮಾಣದಲ್ಲಿ ಸುರಕ್ಷತಾ ಕ್ರಮಗಳನ್ನು ಪಾಲಿಸದ ಮನೆ ಮಾಲೀಕರ ವಿರುದ್ಧ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಅಗ್ನಿ ಅವಘಡದಲ್ಲಿ ಮೃತಪಟ್ಟ ಕುಟುಂಬ ಸದಸ್ಯರಿಗೆ ಈಗಾಗಲೇ ಪರಿಹಾರ ಘೋಷಿಸಲಾಗಿದೆ. ಅವೈಜ್ಞಾನಿಕವಾಗಿ ನಿರ್ಮಾಣಮಾಡಿರುವ ಹಾಗೂ ದುರ್ಬಲಗೊಂಡಿರುವ ಕಟ್ಟಡಗಳನ್ನು ಗುರುತಿಸಿ ನೋಟಿಸ್ ನೀಡುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು. ನಗರದಲ್ಲಿ ಶೇಕಡಾ ೭೦ ರಷ್ಟು ಕಟ್ಟಡ ನಿರ್ಮಾಣ ಅಕ್ರಮವಾಗಿದೆ. ನೂತನ ಬಿಡಿಎ ಲೇಔಟ್‌ಗಳಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚು ಮಹಡಿ ನಿರ್ಮಾಣ ಮಾಡುತ್ತಿದ್ದಾರೆ. ವಾಸಯೋಗ್ಯ ಪ್ರಮಾಣಪತ್ರವಿಲ್ಲದೇ ನೀರು ವಿದ್ಯುತ್ ಸಂಪರ್ಕ ನೀಡಬಾರದು ಎಂಬ ಸುಪ್ರೀಂಕೋರ್ಟ್ ನಿರ್ದೇಶನದ ಹಿನ್ನೆಲೆಯಲ್ಲಿ, ೪ ಲಕ್ಷ ಸಂಪರ್ಕಗಳನ್ನು ಸ್ಥಗಿತಗೊಳಿಸಲಾಗಿದೆ. ೩೦-೪೦ ಅಳತೆಯ ಎರಡು ಮಹಡಿಯ ಕಟ್ಟಡಗಳಿಗೆ ವಿನಾಯಿತಿ ನೀಡಬೇಕು ಎನ್ನುವ ವಿಚಾರ ಕುರಿತು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ತಿಳಿಸಿದರು.

<><><><>

ಈ ಬಾರಿಯ ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ಪರಿಸರ ಸ್ನೇಹಿ ಬಣ್ಣ ರಹಿತ ಮಣ್ಣಿನ ಮೂರ್ತಿಗಳನ್ನು ಪೂಜಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ ಬಿ. ಖಂಡ್ರೆ ನಾಡಿನ ಜನತೆಗೆ ಮನವಿ ಮಾಡಿದ್ದಾರೆ. ನೀರಿನಲ್ಲಿ ಕರಗದ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ವಿಷಕಾರಿಯಾದ ರಾಸಾಯನಿಕ ಬಣ್ಣಲೇಪಿತ ಮೂರ್ತಿಗಳ ವಿಸರ್ಜನೆಯಿಂದ ಜಲಚರಗಳು, ಪಶುಪಕ್ಷಿಗಳ ಸಾವಿಗೆ ಕಾರಣವಾಗುತ್ತಿದೆ ಎಂದು ಅವರು

ಹೇಳಿಕೆಯಲ್ಲಿ ತಿಳಿಸಿದ್ದಾರೆ. ಜಲ ಮಾಲಿನ್ಯ ತಡೆ ಮತ್ತು ನಿಯಂತ್ರಣ ಕಾಯಿದೆಯಡಿ ರಾಜ್ಯದ ನದಿ, ಸರೋವರ, ಕೆರೆ, ಕಟ್ಟೆ, ಬಾವಿ ಸೇರಿದಂತೆ ಯಾವುದೇ ಜಲ ಮೂಲದಲ್ಲಿ ಪಿಒಪಿ ಮೂರ್ತಿಗಳ ವಿಸರ್ಜನೆ ನಿಷೇಧಿಸಲಾಗಿದೆ. ಪ್ರಜ್ಞಾವಂತ ಜವಾಬ್ದಾರಿಯುತ ನಾಗರೀಕರು ಪರಿಸರ ಸ್ನೇಹಿ ಮಣ್ಣಿನ ಗಣಪತಿ ವಿಗ್ರಹಗಳನ್ನು ಪೂಜಿಸಿ ಪರಿಸರ ಉಳಿಸುವಂತೆ ಸಚಿವರು ಮನವಿ ಮಾಡಿದ್ದಾರೆ.

<><><>

ಸ್ವರ್ಣಗೌರಿ ಹಾಗೂ ಗಣೇಶ ಚತುರ್ಥಿ ಹಬ್ಬದ ಹಿನ್ನಲೆಯಲ್ಲಿ ಸಾರ್ವಜನಿಕರು ಪರಿಸರಕ್ಕೆ ಮಾರಕವಾದ ಪ್ಲಾಸ್ಟರ್ ಆಫ್ ಪ್ಯಾರಿಸ್  ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೆ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ಕರ್ನಾಟಕ ರಾಜ್ಯ ಮಾಲಿನ್ಯ ಮಂಡಳಿ ನಿಷೇಧಿಸಿದೆ. ಪಿಒಪಿ ವಿಗ್ರಹಗಳಿಂದ ಭೌತಿಕ ಹಾಗೂ ರಾಸಾಯನಿಕವಾಗಿ ನೀರಿನ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ಆಗುವ ದುಷ್ಪರಿಣಾಮದಿಂದ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಅ ನೀರನ್ನು ಬಳಸುವುದರಿಂದ ಮನುಷ್ಯನ ಆರೋಗ್ಯದಲ್ಲಿ ಏರು-ಪೇರು ಉಂಟಾಗುತ್ತದೆ ಎಂದು ಮಂಡಳಿ ಹೇಳಿಕೆಯಲ್ಲಿ ತಿಳಿಸಿದೆ. ಗೌರಿ ಗಣೇಶ ಹಬ್ಬದ ಸಂದರ್ಭದಲ್ಲಿ ಬಣ್ಣರಹಿತ ಮಣ್ಣಿನ ಅಥವಾ ನೈಸರ್ಗಿಕ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ, ತದನಂತರ ಗೌರಿ ಗಣೇಶ ಮೂರ್ತಿಗಳನ್ನು ಸ್ಥಳೀಯ ಸಂಸ್ಥೆಗಳು ನಿಗದಿ ಪಡಿಸಿರುವ ಸ್ಥಳಗಳಲ್ಲಿ ಇಲ್ಲವೇ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸಂಚಾರಿ ವಾಹನದಲ್ಲಿಯೇ ನಿಯಮಾನುಸಾರ ವಿಸರ್ಜಿಸಬೇಕು ಎಂದು  ಸೂಚಿಸಿದೆ.

<><><>

ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣವನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದರು. ತುಮಕೂರು ರೈಲ್ವೆ ಪ್ರಯಾಣಿಕರ ವೇದಿಕೆಯ ೧೧ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿಂದು ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ದೇಶಕ್ಕೆ ಹೊಸ ಆಯಾಮ ನೀಡಿದ್ದು, ಜಿಲ್ಲೆಯಲ್ಲಿ ಹತ್ತಾರು ವರ್ಷಗಳಿಂದ ನನೆಗುದಿಗೆ ಬಿದಿದ್ದ ರೈಲ್ವೆ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತಿದೆ ಎಂದರು. ಬೆಂಗಳೂರಿನ ಸಂಗೋಳ್ಳಿರಾಯಣ್ಣ ರೈಲ್ವೆ ನಿಲ್ದಾಣವನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ತುಮಕೂರಿನಲ್ಲಿ ಈಗ ವಂದೇ ಭಾರತ್ ರೈಲುಗಳು ನಿಲುಗಡೆಯಾಗುತ್ತಿದ್ದು, ತುಮಕೂರಿನ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು. ಬೆಂಗಳೂರು-ತುಮಕೂರು ನಡುವೆ ನಾಲ್ಕು ಪಥ ನಿರ್ಮಿಸಲಾಗುತ್ತಿದ್ದು, ರೈಲ್ವೆ ಕಾಮಗಾರಿ ತ್ವರಿತ ಗತಿಯಲ್ಲಿ ನಡೆಯುತ್ತಿದೆ ಎಂದು ತಿಳಿಸಿದರು.

<><><>

ಕೋಲಾರ ಜಿಲ್ಲೆ  ಕುರುಗಲ್ ಪಟ್ಟಣ ಪಂಚಾಯಿತಿಯ ೧೭ ಸ್ಥಾನಗಳಿಗೆ  ಇಂದು ಬೆಳಿಗ್ಗೆ ೭ ಗಂಟೆಯಿಂದ ಮತದಾನ ಆರಂಭವಾಗಿದೆ. ಕೋಲಾರ ಜಿಲ್ಲಾಧಿಕಾರಿ ಎಂ.ಆರ್.ರವಿ ಚುನಾವಣೆ ನಡೆಯುತ್ತಿರುವ ಚನ್ನಪ್ಪನಹಳ್ಳಿ,

ವೇಮಗಲ್ ಹಾಗೂ ಮಂಜಲಿ ಮತಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಒಂದು ಗಂಟೆ ವೇಳೆಗೆ ಶೇಕಡ ೫೭.೧೧ರಷ್ಟು ಮತದಾನದಾನವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಂಗಳಾ ಎಸ್.ಎಂ ತಿಳಿಸಿದ್ದಾರೆ.

<><><><>

ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರವಾಗಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜಸಾಗರ ಜಲಾಶಯಕ್ಕೆ ಒಳಹರಿವು ಪ್ರಮಾಣ ಹೆಚ್ಚಾಗುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಭಾನುವಾರ ಅಣೆಕಟ್ಟೆಯಿಂದ ೨೫ ಸಾವಿರ ದಿಂದ ೫೦ ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹೊರಬಿಡಲಾಗುತ್ತಿದೆ. ಕಾವೇರಿ ನದಿ ಪಾತ್ರದಲ್ಲಿನ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ. ತಗ್ಗು ಪ್ರದೇಶಗಳಲ್ಲಿರುವ ರೈತರು ಕೃಷಿ ಚಟುವಟಿಕೆಗಳಿಗೆ ಹೋಗದಂತೆ ಹಾಗೂ ಜಾನುವಾರುಗಳನ್ನು ಬಿಡದಂತೆ ಜಾಗ್ರತೆ ವಹಿಸಬೇಕು. ನೀರಿನಲ್ಲಿ ಈಜುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಅಭಿಯಂತರ ರಘುರಾಮ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ರಾಜ್ಯ ಕ್ರಿಕೆಟ್ ಸಂಸ್ಥೆ ಮೈಸೂರಿನಲ್ಲಿ ಆಯೋಜಿಸಿರುವ ಪ್ರತಿಷ್ಠಿತ ಮಹಾರಾಜ ಟ್ರೋಫಿ-೨೦೨೫ರ ಟಿ-೨೦ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಮಂಗಳೂರು ಡ್ರಾಗನ್ಸ್ ಹಾಗೂ ಬೆಂಗಳೂರು ಬ್ಲಾಸ್ಟರ್ಸ್ ತಂಡಗಳ ನಡುವೆ ಹಣಾಹಣಿ ನಡೆಯಲಿದೆ. ಮಾನಸ ಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ  ಇಂದು ಅಪರಾಹ್ನ ೩-೧೫ಕ್ಕೆ ಪಂದ್ಯ ಆರಂಭವಾಗಲಿದೆ. ಬಳಿಕ ಇಂದು ಸಂಜೆ ೭-೧೫ಕ್ಕೆ ಮೈಸೂರು ವಾರಿಯರ್ಸ್ ಮತ್ತು ಶಿವಮೊಗ್ಗ ಲಯನ್ಸ್ ತಂಡಗಳ ನಡುವೆ ಎರಡನೇ ಪಂದ್ಯ ನಡೆಯಲಿದೆ.

<><><><>

ದೇಶದ ಉಜ್ವಲ ಭವಿಷ್ಯ ನಿರ್ಧರಿಸುವಲ್ಲಿ ವಿದ್ಯಾರ್ಥಿಗಳಿಗೆ ಇತಿಹಾಸದ ಪ್ರಜ್ಞೆ ಅಗತ್ಯವಾಗಿದೆ. ಇತಿಹಾಸವು ನಮ್ಮ ಹೋರಾಟಗಳ ಅನುಭವ ಕಥೆಯಾಗಿದೆ ಎಂದು ಪದವಿ ಪೂರ್ವ ಶಾಲಾ ಶಿಕ್ಷಣ ಉಪ ನಿರ್ದೇಶಕರಾದ ಡಾಕ್ಟರ್ ತೇಜಸ್ವಿನಿ ನಾರಾಯಣಕರ್ ಹೇಳಿದ್ದಾರೆ. ಧಾರವಾಡ, ಕರ್ನಾಟಕ ವಿದ್ಯಾವರ್ಧಕ ಸಂಘ ಆಯೋಜಿಸಿದ್ದ, 'ಅಖಂಡ ಧಾರವಾಡ ಜಿಲ್ಲೆಯ ಸ್ವಾತಂತ್ರ್ಯ ಹೋರಾಟಗಾರರು' ಗ್ರಂಥ ಬಿಡುಗಡೆಗೊಳಿಸಿ ಅವರು  ಮಾತನಾಡಿದರು. ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ, ಶಂಕರ ಹಲಗತ್ತಿ ಮಾತನಾಡಿ, ಕಳೆದ ೧೩೮ ವರ್ಷಗಳಿಂದ ಸಂಘವು ಶಿಕ್ಷಣ, ಸಾಹಿತ್ಯ, ಸಂಸ್ಕೃತಿ, ಶ್ರೇಯೋಭಿಲಾಷೆಗಾಗಿ ನಿರಂತರವಾಗಿ ಶ್ರಮಿಸುತ್ತಿದೆ. ದೇಶದ ಸ್ವಾತಂತ್ರ್ಯ ಹೋರಾಟ ಹಾಗೂ ಏಕೀಕರಣಕ್ಕಾಗಿ ಸಂಘದ ಸೇವೆ ಸ್ಮರಣೀಯವಾದದ್ದು. ಇಲಾಖೆಯ ರಚನಾತ್ಮಕ ಕಾರ್ಯಕ್ರಮಕ್ಕೆ ಸಂಘ ಸದಾಕಾಲ ಸಹಕಾರ ನೀಡಲಿದೆ ಎಂದರು.

<><><><>

ಯಾದಗಿರಿ ನಗರದ ಗಾಂಧಿ ಚೌಕ್ ನಲ್ಲಿರುವ ನವೀಕರಣಗೊಂಡಿರುವ ಮಹಾತ್ಮ ಗಾಂಧೀಜಿ ಅವರ ಪುತ್ಥಳಿಯನ್ನು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಅನಾವರಣಗೊಳಿಸಿದರು. ನಂತರ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸುಮಾರು ೧೫ ಲಕ್ಷ ರೂಪಾಯಿ ಅನುದಾನದಲ್ಲಿ ಮಹಾತ್ಮ ಗಾಂಧೀಜಿ ಪುತ್ಥಳಿಗೆ ಮೇಲ್ಛಾವಣಿ, ನೀರಿನ ಕಾರಂಜಿ, ಗ್ರಿಲ್ ಅಳವಡಿಕೆ ಸೇರಿ ವಿವಿಧ ಕಾಮಗಾರಿ ಕೈಗೊಂಡು ನವೀಕರಣ

ಮಾಡಲಾಗಿದೆ ಎಂದರು. ಗಾಂಧೀಜಿ ಮೇಲ್ಛಾವಣಿ ಸುತ್ತಲೂ ಗ್ರಿಲ್ ಆಳವಡಿಸಲಾಗಿದೆ. ನೀರಿನ ಕಾರಂಜಿ ಹಾಗೂ ಕಟ್ಟೆಯ ಸುತ್ತಲೂ ಗ್ರಾನೈಟ್ ಕಲ್ಲುಹಾಸಿನ ಜೊತೆಗೆ ಸರ್ಕಲ್‌ನಲ್ಲಿ ಹೈಮಾಸ್ಟ್ ದೀಪ ಅಳವಡಿಸಲಾಗಿದೆ ಎಂದು ಅವರು ತಿಳಿಸಿದರು.

<><><><>

ಅಪರಾಧ ಕೃತ್ಯಗಳನ್ನು ತಡೆಯಲು ಹಾಗೂ ಸಂಚಾರ ನಿಯಮಗಳ ಉಲ್ಲಂಘನೆ ನಿಯಂತ್ರಿಸಲು ನಗರ ಹಾಗೂ ಸುತ್ತಲಿನ ಪ್ರಮುಖ ರಸ್ತೆಗಳಲ್ಲಿ ೬೪ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದ್ದಾರೆ. ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಸಿಸಿಟಿವಿ ಕ್ಯಾಮೆರಾಗಳ ಕಾರ್ಯಾಚರಣೆ ಹಾಗೂ ನಿಯಂತ್ರಣ ಕೊಠಡಿಗೆ ಚಾಲನೆ ನೀಡಿ ಮಾತನಾಡಿದ ಅವರು, ಒಟ್ಟು ೭೦ ಲಕ್ಷ ರೂಪಾಯಿಗೂ ಹೆಚ್ಚು ಅನುದಾನ ಬಳಸಿಕೊಂಡು ೬೪ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಕೆ ಮಾಡಲಾಗಿದೆ. ನಗರದ ನಾಲ್ಕೂ ದಿಕ್ಕುಗಳಿಗೆ ತಂತ್ರಜ್ಞಾನದ ಕಣ್ಗಾವಲು ಇರಲಿದೆ ಎಂದರು. ನಗರದ ರಸ್ತೆಗಳು, ಪ್ರಮುಖ ಸ್ಥಳಗಳಲ್ಲಿ ನಡೆಯುವ ಚಟುವಟಿಕೆಗಳನ್ನು ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿಯಂತ್ರಣ ಕೊಠಡಿಯಲ್ಲಿ ಕುಳಿತು ನಿಗಾ ಇರಿಸಬಹುದು ಎಂದು ಅವರು ಹೇಳಿದರು. ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಮಾತನಾಡಿ, ಅಪ್ರಾಪ್ತ ವಾಹನ ಚಾಲಕರ ಮೇಲೆ ನಿಗಾ ಇರಿಸಲಾಗುವುದು. ಮಕ್ಕಳ ಪೋಷಕರಿಗೆ ದಂಡದ ಜೊತೆಗೆ ೩ ತಿಂಗಳು ಜೈಲು ಶಿಕ್ಷೆಯಾಗಬಹುದು ಎಂದು ಎಚ್ಚರಿಸಿದರು.

<><><><>

ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲ್ಲೂಕಿನ ಭೈರಾಪುರ ಕ್ರಾಸ್ ಬಳಿ ಇಂದು ಸಂಭವಿಸಿದ ರಸ್ತೆ ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದ್ದು, ೧೨ ಜನರು ಗಾಯಗೊಂಡಿರುವ ಘಟನೆ ನಡೆದಿದೆ. ರಾಜ್ಯ ಸಾರಿಗೆ ಸಂಸ್ಥೆ ಬಸ್ ಮತ್ತು ಲಾರಿ ನಡುವೆ ಡಿಕ್ಕಿ ಉಂಟಾಗಿ ಈ ಅಪಘಾತ ಸಂಭವಿಸಿದೆ. ಮೃತರನ್ನು ಮಂಡ್ಯ ಜಿಲ್ಲೆಯ ಮಳವಳ್ಳಿ ಹಾಗೂ ಚನ್ನಪಟ್ಟಣ ತಾಲೂಕಿಗೆ ಸೇರಿದವರು ಎಂದು ಗುರುತಿಸಲಾಗಿದೆ. ಈ ಸಂಬಂಧ ಸಿರಿಗೇರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>